**All India Radio: Bangalorep**
**National Bulletin In Kannada**
**18.02.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.02.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಭಾರತ-ಫ್ರಾನ್ಸ್ ಸಂಬಂಧವನ್ನು ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಗೆ ಮೇಲ್ದರ್ಜೆಗೇರಿಸಲು ಉಭಯ ರಾಷ್ಟ್ರಗಳ ಒಮ್ಮತ**

**೨. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ; ಹಲವು ಜಾಗತಿಕ ನಾಯಕರೊಂದಿಗೆ ಇಂದು ಪ್ರಧಾನಿ ಸಭೆ**

**೩. ವಿಶಾಖಪಟ್ಟಣದಲ್ಲಿಂದು ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆ ೨೦೨೬ ವೀಕ್ಷಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು**

**೪. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಸ್ಕಾಟ್ಲೆಂಡ್ ವಿರುದ್ಧ ನೇಪಾಳಕ್ಕೆ ಏಳು ವಿಕೆಟ್‌ಗಳ ಜಯ**

**<>><><*><><<>**

ಭಾರತ ಮತ್ತು ಫ್ರಾನ್ಸ್ ನಡುವಿನ ಸಂಬಂಧವನ್ನು ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯಾಗಿ ಮೇಲ್ದರ್ಜೆಗೇರಿಸಲು ಉಭಯ ರಾಷ್ಟ್ರಗಳು ಒಮ್ಮತ ವ್ಯಕ್ತಪಡಿಸಿವೆ. ಉನ್ನತ ಪಾಲುದಾರಿಕೆ ಮತ್ತು ಹೊರೈಜನ್ ೨೦೪೭ ಮಾರ್ಗಸೂಚಿಯ ಅನುಷ್ಠಾನವನ್ನು ನಿಯಮಿತವಾಗಿ ಪರಿಶೀಲಿಸಲು ವಾರ್ಷಿಕ ವಿದೇಶಾಂಗ ಸಚಿವರ ಸಂವಾದವನ್ನು ಆಯೋಜಿಸಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ. ಉಭಯ ರಾಷ್ಟ್ರಗಳು ಭಾರತ-ಫ್ರಾನ್ಸ್ ನಾವೀನ್ಯತೆಯ ವರ್ಷ ಮತ್ತು ನಾವೀನ್ಯತೆಯ ಜಾಲವನ್ನು ಪ್ರಾರಂಭಿಸಲು ಸಹಮತ ವ್ಯಕ್ತಪಡಿಸಿವೆ. ಮುಂಬೈನ ಲೋಕ ಭವನದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಜಂಟಿ ಹೇಳಿಕೆ ನೀಡಿದ ಪ್ರಧಾನಿ ನರೇಂದ್ರ ಮೋದಿ, ಇಂದಿನ ಅಸ್ಥಿರ ಜಾಗತಿಕ ಪರಿಸ್ಥಿತಿಯ ನಡುವೆಯೂ ಈ ಪಾಲುದಾರಿಕೆ ಕಾರ್ಯತಂತ್ರವಾಗುವ ಜೊತೆಗೆ ಜಾಗತಿಕ ಸ್ಥಿರತೆ ಮತ್ತು ಸಮೃದ್ಧಿಗೂ ಪೂರಕವಾಗಿದೆ ಎಂದು ಪ್ರತಿಪಾದಿಸಿದರು.

**<>><><*><><<>**

೨೦೨೬ ರಲ್ಲಿ ಫ್ರಾನ್ಸ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ೫೨ನೇ ಜಿ-೭ ಶೃಂಗಸಭೆಗೆ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರು ಪ್ರಧಾನಿ ನರೇಂದ್ರ ಮೋದಿಯವರನ್ನು ಆಹ್ವಾನಿಸಿದ್ದಾರೆ. ಮುಂಬೈನಲ್ಲಿ ಹೇಳಿಕೆ ನೀಡಿರುವ ಅಧ್ಯಕ್ಷ ಮ್ಯಾಕ್ರನ್, ಎವಿಯನ್‌ನಲ್ಲಿ ನಡೆಯಲಿರುವ ಜಿ-೭ ಶೃಂಗಸಭೆಗೆ ಮುಂಚಿತವಾಗಿ ಅಂತಾರಾಷ್ಟ್ರೀಯ ಕಾರ್ಯಸೂಚಿಯಲ್ಲಿ ಒಪ್ಪಂದಕ್ಕೆ ಬರಲು ಭಾರತ ಮತ್ತು ಫ್ರಾನ್ಸ್ ನಡುವೆ ತಾತ್ಕಾಲಿಕ ಸಭೆಗೆ ಕರೆ ನೀಡಿದ್ದಾರೆ.

**<>><><*><><<>**

ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಗಾಗಿ ನವದೆಹಲಿಯಲ್ಲಿರುವ ಹಲವು ಜಾಗತಿಕ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಸಭೆ ನಡೆಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್, ಫಿನ್ಲ್ಯಾಂಡ್ ಪ್ರಧಾನಿ ಆಂಟಿ ಪೆಟ್ಟೆರಿ ಓರ್ಪೋ, ಸೆರ್ಬಿಯಾ ಅಧ್ಯಕ್ಷ ಅಲೆಕ್ಸಾಂಡರ್ ವುಸಿಕ್, ಕ್ರೊಯೇಷಿಯಾದ ಪ್ರಧಾನಿ ಆಂಡ್ರೆಜ್ ಪ್ಲೆಂಕೋವಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಭೂತಾನ್ ಪ್ರಧಾನಿ ದಾಶೋ ತ್ಸೆರಿಂಗ್ ಟೋಬ್ಗೇ ಮತ್ತು ಕಝಾಕಿಸ್ತಾನ್ ಪ್ರಧಾನಿ ಓಲ್ಜಾಸ್ ಬೆಕ್ಟೆನೋವ್ ಅವರನ್ನು ಭೇಟಿ ಮಾಡಲಿದ್ದಾರೆ.

**<>><><*><><<>**

ದೆಹಲಿಯಲ್ಲಿ ನಡೆಯುತ್ತಿರುವ ೨೦೨೬ ರ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಮೂರನೇ ದಿನವಾದ ಇಂದು, ಎಸ್ಟೋನಿಯಾ ಅಧ್ಯರಾದ ಅಲರ್ ಕರಿಸ್, ಎಲೆಕ್ಟ್ರಾನಿಕ್ಸ್ ಮತ್ತು ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವ ಜಿತಿನ್ ಪ್ರಸಾದ ಮತ್ತು ಇತರ ಗಣ್ಯರು ಸಂಶೋಧನಾ ವಿಚಾರ ಸಂಕಿರಣದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದರ ಜೊತೆಗೆ, ಉದ್ಘಾಟನಾ ಅಧಿವೇಶನ ಮತ್ತು ಕಾರ್ಯನಿರತ ಗುಂಪಿನ ಉದ್ಘಾಟನೆ ಜರುಗಲಿದೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ನೌಕಾಪಡೆ ವಿಮರ್ಶೆ ೨೦೨೬ ರಲ್ಲಿ ಭಾಗವಹಿಸಲಿದ್ದಾರೆ. ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿ, ರಾಷ್ಟ್ರಪತಿಗಳು ನೌಕಾಪಡೆಯನ್ನು ಪರಿಶೀಲಿಸಲಿದ್ದು, ಭಾರತದ ನೌಕಾ ಶಕ್ತಿ ಮತ್ತು ಕಡಲ ಸಾಮರ್ಥ್ಯಗಳ ಅದ್ಭುತ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ಫೆಬ್ರವರಿ ೧೫ ರಿಂದ ಇದೇ ೨೫ ರವರೆಗೆ ಭಾರತೀಯ ನೌಕಾಪಡೆಯು ವಿಶಾಖಪಟ್ಟಣದಲ್ಲಿ ಐಎಫ್‌ಆರ್ ಅನ್ನು ಆಯೋಜಿಸುತ್ತಿದೆ. ರಾಷ್ಟ್ರಪತಿಗಳು ನಿನ್ನೆ ಸಂಜೆ ವಿಶಾಖಪಟ್ಟಣಕ್ಕೆ ಆಗಮಿಸಿದರು.

**<>><><*><><<>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪಶ್ಚಿಮ ಬಂಗಾಳಕ್ಕೆ ಒಂದು ದಿನದ ಭೇಟಿ ನೀಡಲಿದ್ದಾರೆ. ಕೋಲ್ಕತ್ತಾಗೆ ಆಗಮಿಸಿದ ನಂತರ, ಅವರು ನಾಡಿಯಾದ ಮಾಯಾಪುರದಲ್ಲಿರುವ ಇಸ್ಕಾನ್ ಪ್ರಧಾನ ಕಚೇರಿಗೆ ಶ್ರೀಲ ಭಕ್ತಿಸಿದ್ಧಾಂತ ಸರಸ್ವತಿ ಠಾಕೂರ್ ಅವರ ೧೫೨ನೇ ಜನ್ಮ ದಿನಾಚರಣೆಯ ಹಿನ್ನೆಲೆಯಲ್ಲಿ ತೆರಳಲಿದ್ದಾರೆ. ಜಯಪತಾಕ ಸ್ವಾಮಿ ಮಹಾರಾಜರೊಂದಿಗೆ ಉನ್ನತ ಮಟ್ಟದ ಸಭೆ ಮತ್ತು ದೇವಾಲಯದ ಆವರಣದಲ್ಲಿ ಆಯೋಜಿಸಲಾದ ಸಾರ್ವಜನಿಕ ಸಭೆಯಲ್ಲಿ ಸಚಿವರು ಭಾಷಣ ಮಾಡಲಿದ್ದಾರೆ.

**<>><><*><><<>**

ಬಾಂಗ್ಲಾದೇಶದ ಪ್ರಧಾನಿ ತಾರಿಕ್ ರೆಹಮಾನ್ ಅವರನ್ನು ತಮ್ಮ ಕುಟುಂಬದೊಂದಿಗೆ ಭಾರತಕ್ಕೆ ಭೇಟಿ ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಆಹ್ವಾನಿಸಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ಬಹುಮುಖಿ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಬಿಎನ್‌ಪಿ ನಾಯಕರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುವ ಬಯಕೆಯನ್ನು ಪ್ರಧಾನಿ ವ್ಯಕ್ತಪಡಿಸಿದ್ದಾರೆ. ಭಾರತ ಮತ್ತು ಬಾಂಗ್ಲಾದೇಶ, ಹಂಚಿಕೆಯ ಇತಿಹಾಸ, ಸಾಂಸ್ಕೃತಿಕ ಸಂಬಂಧಗಳು ಹಾಗೂ ಶಾಂತಿ ಮತ್ತು ಸಮೃದ್ಧಿಗಾಗಿ ಜನರ ಆಕಾಂಕ್ಷೆಗಳ ಮೇಲೆ ಬೇರೂರಿರುವ ಸ್ನೇಹವನ್ನು ಹೊಂದಿವೆ ಎಂದು ಪ್ರಧಾನಿ ಹೇಳಿದ್ದಾರೆ. ನಿನ್ನೆ ತಾರಿಖ್ ರೆಹಮಾನ್ ಬಾಂಗ್ಲಾದೇಶದ ನೂತನ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಸಮಾರಂಭದಲ್ಲಿ ಭಾರತದ ಪ್ರತಿನಿಧಿಯಾಗಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಹಿರಿಯ ರಾಜಕೀಯ ನಾಯಕರು ಮತ್ತು ಉನ್ನತ ಮಿಲಿಟರಿ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**<>><><*><><<>**

ಕರ್ನಾಟಕದ ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಲಘು ಹೆಲಿಕಾಪ್ಟರ್‌ಗಳ ಅಂತಿಮ ಜೋಡಣಾ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ನಿನ್ನೆ ಲೋಕಾರ್ಪಣೆಗೊಳಿಸಿದರು. ಇದೇ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ-ಫ್ರಾನ್ಸ್ ಸಹಭಾಗಿತ್ವದಲ್ಲಿ ಆರಂಭಗೊಂಡಿರುವ ಈ ಹೆಲಿಕಾಪ್ಟರ್, ಮೌಂಟ್ ಎವರೆಸ್ಟ್‌ನಂತಹ ಎತ್ತರದ ಪ್ರದೇಶಗಳ ಮೇಲೂ ಹಾರಾಟ ಮಾಡಲು ಶಕ್ತವಾಗಿದೆ ಎಂದು ತಿಳಿಸಿದರು. ಈ ವೇಳೆ ವೇಮಗಲ್‌ನ ಹೆಲಿಕಾಪ್ಟರ್ ಘಟಕದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಫ್ರಾನ್ಸ್ ರಕ್ಷಣಾ ಸಚಿವೆ ಕ್ಯಾಥರಿನ್ ವ್ಯಾಟ್ರಿನ್, ಕೇಂದ್ರ ಸಚಿವ ರಾಮ್‌ಮೋಹನ್ ನಾಯ್ಡು, ರಾಜ್ಯ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮೇಕ್ ಇನ್ ಇಂಡಿಯಾ ಹಾಗೂ ಆತ್ಮನಿರ್ಭರ ಭಾರತದ ಫಲವಾಗಿ ಇಂದು ಈ ಘಟಕ ಆರಂಭಗೊಂಡಿದೆ. ಭಾರತ ಇಂದು ರಕ್ಷಣಾ ವಲಯದ ರಫ್ತಿನಲ್ಲಿ ವಿಶ್ವದಲ್ಲೇ ಅಗ್ರಗಣ್ಯ ರಾಷ್ಟ್ರವಾಗಿ ಹೊರಹೊಮ್ಮಿದೆ. ವಿಶ್ವದ ಹಲವು ರಾಷ್ಟ್ರಗಳು ಭಾರತದ ಎಮ್‌ಎಸ್‌ಎಮ್‌ಇ ಗಳೊಂದಿಗೆ ಉತ್ಪಾದನಾ ಕ್ಷೇತ್ರಗಳಲ್ಲಿ ಪಾಲುದಾರರಾಗಲು ಬಯಸುತ್ತಿದೆ ಎಂದು ತಿಳಿಸಿದರು. ಎಚ್-೧೨೫ ಹೆಲಿಕಾಪ್ಟರ್ ಘಟಕದಿಂದ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಕೌಶಲ್ಯಯುಕ್ತ ಯುವಕರಿಗೆ ಉದ್ಯೋಗ ದೊರೆಯಲಿದೆ. ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಸಿಂಗಲ್ ಎಂಜಿನ್ ಹೆಲಿಕಾಪ್ಟರ್, ವಿಶ್ವದಲ್ಲೇ ನಂಬಿಕಾರ್ಹ ಹೆಲಿಕಾಪ್ಟರ್ ಆಗಿ ಹೊರಹೊಮ್ಮಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.

**ಧ್ವನಿ: ರಾಜನಾಥ್ ಸಿಂಗ್ ( ೨೪ ಸೆಕೆಂಡ್ಸ್)**

**<>><><*><><<>**

ಭಾರತ ಇಂದು ಜಾಗತಿಕ ಪಾಲುದಾರರೊಂದಿಗೆ ಹೆಚ್ಚು ತೀವ್ರವಾಗಿ ತೊಡಗಿಸಿಕೊಂಡಿದೆ. ಇತ್ತೀಚೆಗೆ ಮುಕ್ತಾಯಗೊಂಡ ವ್ಯಾಪಾರ ಒಪ್ಪಂದಗಳು ಬೆಳೆಯುತ್ತಿರುವ ಆರ್ಥಿಕ ವಿಶ್ವಾಸಕ್ಕೆ ಸಾಕ್ಷಿಯಾಗಿವೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಜಾಗತಿಕ ಆರ್ಥಿಕ ಸಹಕಾರ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಶಸ್ತ್ರವಾಗಿ ಉತ್ಪಾದನೆ ಮತ್ತು ಹಣಕಾಸು ಬಳಕೆ, ರಫ್ತು ನಿಯಂತ್ರಣಗಳನ್ನು ಬಿಗಿಗೊಳಿಸುವುದು ಮತ್ತು ಹೆಚ್ಚುತ್ತಿರುವ ಅನಿಶ್ಚಿತತೆಯನ್ನು ಜಗತ್ತು ಗಮನಿಸುತ್ತಿದೆ. ಜಾಗತಿಕ ಕ್ರಮವು ಗಮನಾರ್ಹ ಬದಲಾವಣೆಗೆ ಒಳಗಾಗುತ್ತಿದೆ ಎಂದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ದೂರವಾಣಿ ಸಂಭಾಷಣೆಯ ನಂತರ, ಭಾರತೀಯ ಸರಕುಗಳ ಮೇಲಿನ ಸುಂಕವನ್ನು ಅಮೆರಿಕ ಶೇಕಡಾ ೫೦ ರಿಂದ ಶೇಕಡಾ ೧೮ ಕ್ಕೆ ಇಳಿಸಿದೆ. ಭಾರತ ಮತ್ತು ಐರೋಪ್ಯ ಒಕ್ಕೂಟದ ನಡುವಿನ ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದ ಕುರಿತ ಮಾತುಕತೆಗಳ ಫಲಿತಾಂಶವನ್ನು ಸಚಿವರು ವಿವರಿಸಿದರು. ಭಾರತದ ಪ್ರಾಯೋಗಿಕ ಮತ್ತು ಜನ-ಕೇಂದ್ರಿತ ನೀತಿಗಳು ವಿಶ್ವಾಸಾರ್ಹ ಜಾಗತಿಕ ಪಾಲುದಾರನಾಗಿ ತನ್ನ ಸ್ಥಾನವನ್ನು ಬಲಪಡಿಸುತ್ತಿವೆ ಎಂದು ಡಾ. ಎಸ್. ಜೈಶಂಕರ್ ಹೇಳಿದರು.

**<>><><*><><<>**

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಪುರುಷರ ಟಿ ೨೦ ವಿಶ್ವಕಪ್ ಕ್ರಿಕೆಟ್‌ನ ಗ್ರೂಪ್ ಸಿ ಪಂದ್ಯದಲ್ಲಿ ನೇಪಾಳ ತಂಡ ಸ್ಕಾಟ್ಲೆಂಡ್ ಅನ್ನು ಏಳು ವಿಕೆಟ್‌ಗಳಿಂದ

ಸೋಲಿಸಿದೆ. ಇಂದು ಮೂರು ಪಂದ್ಯಗಳು ನಡೆಯಲಿದ್ದು, ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಬೆಳಗ್ಗೆ ೧೧ ಗಂಟೆಗೆ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಯುಎಇ ವಿರುದ್ಧ ಸೆಣಸಲಿದೆ.  ಎರಡನೇ ಪಂದ್ಯದಲ್ಲಿ, ಕೊಲಂಬೊದ ಸಿಂಹಳೀಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಮಧ್ಯಾಹ್ನ ೩ ಗಂಟೆಗೆ ನಡೆಯಲಿರುವ ಗ್ರೂಪ್ 'ಎ' ಪಂದ್ಯದಲ್ಲಿ ಪಾಕಿಸ್ತಾನ ನಮೀಬಿಯಾ ತಂಡವನ್ನು ಎದುರಿಸಲಿದೆ.  ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಮೂರನೇ ಪಂದ್ಯದಲ್ಲಿ, ಭಾರತ ಮತ್ತು ನೆದರ್ಲೆಂಡ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

**<>><><*><><<>**

ಎಸಿಸಿ ಮಹಿಳಾ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ನಿನ್ನೆ ನಡೆದ ಗ್ರೂಪ್ ಎ ಪಂದ್ಯದಲ್ಲಿ ನೇಪಾಳ ವಿರುದ್ಧ ಭಾರತದ ವನಿತೆಯರ ತಂಡ ಏಳು ವಿಕೆಟ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಸೆಮಿಫೈನಲ್ ಪ್ರವೇಶಿಸಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**